ಸಂಯುಕ್ತ ಕರ್ನಾಟಕ

**Monday 31st July 2017**

# 7th Year Graduation Day Celebration at RVCE



ಆರ್‌ವಿ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ಪದವಿ ಪ್ರದಾನ ಸಮಾರಂಭದಲ್ಲಿ ಡಾ. ಯಜ್ ಮೆದುರಿ ಪದವಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಡಾ. ಎಂ.ಕೆ. ಪಾಂಡುರಂಗ ಶೆಟ್ಟಿ, ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಹ್ಮಣ್ಯ ಉಪಸ್ಥಿತರಿದ್ದರು.

## ಪ್ರಗತಿಗೆ ಹೆಗಲು ಕೊಡಿ–ವಿದ್ಯಾರ್ಥಿಗಳಿಗೆ ಕಿವಿಮಾತು

**ಬೆಂಗಳೂರು:** ಬಡತನ ನಿರ್ಮೂಲನೆ, ಆರೋಗ್ಯ, ಶೈಕ್ಷಣಿಕ ಪ್ರಗತಿ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ದೇಶಕ್ಕೆ ಕೀರ್ತಿ ತರಬೇಕೆಂದು ದೆಹಲಿಯ ಬೆನ್ನೆತ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಯಜ್ ಮೆದುರಿ ಕರೆ ನೀಡಿದರು.

ಆರ್‌ವಿ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ, 7ನೇ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿ, ಇಂದಿನ ತಾಂತ್ರಿಕತೆಯ ಪ್ರಗತಿಯಲ್ಲಿ ನಮ್ಮ ಹಿಂದಿನ ವಿಜ್ಞಾನಿಗಳ ಸಂಶೋಧಕರ ಮಹತ್ವದ ಪಾತ್ರದ ಪರಿಣಾಮದಿಂದಾಗಿ ಜಾಗತಿಕ ಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯವಾಗಿದೆ. ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನಕ್ಕೆ ತಕ್ಕಂತೆ ಸಂಶೋಧನೆ, ಮೂಲಭೂತ ಜ್ಞಾನ ಹಾಗೂ ಸಾಮಾಜಿಕ ಜವಾಬ್ದಾರಿ ಮೂಲಕ ಕಾರ್ಯನಿರ್ವಹಿಸುವ ಅಗತ್ಯತೆ ಇದೆ. ವಿದ್ಯಾರ್ಥಿಗಳು ಕೌಶಲ್ಯಾಭಿವೃದ್ಧಿಯನ್ನು ರೂಢಿಸಿಕೊಂಡು ದೇಶದ ಪ್ರಗತಿಗೆ ಕೈಜೋಡಿಸಬೇಕೆಂದು ಅವರು ತಿಳಿಸಿದರು.

ವಿಶ್ವದಲ್ಲಿಯೇ ಭಾರತ ಆರ್ಥಿಕ ಪ್ರಗತಿಯ ಕಡೆಗೆ ದಾಪುಗಾಲು ಹಾಕುತ್ತಿದ್ದು ಅದನ್ನ ಉಳಿಸಿಕೊಂಡು ಬೆಳವಣಿಗೆಗೆ ಕೊಡುಗೆ ನೀಡುವುದು ಸವಾಲಾಗಿದ್ದರೂ ಅದನ್ನ ಮೆಟ್ಟಿನಿಂತು ಆರ್ಥಿಕ ಬೆಳವಣಿಗೆ ಕುಂಠಿತವಾಗುವದನ್ನು, ತಡೆಗಟ್ಟುವ ದಿಕ್ಕಿನತ್ತ ದೃಡ ಹೆಜ್ಜೆ ಹಾಕುವ ಮೂಲಕ ಯುವ ಸಮೂಹ ಹೊಣೆಗಾರಿಕೆ ನಿಭಾಯಿಸಬೇಕೆಂದು ತಿಳಿಸಿದರು.

ಗೌರವಾನ್ವಿತ ಖಜಾಂಚಿ ಕೆ.ಜಿ. ಸುಬ್ರಮಣ್ಯ ಶೆಟ್ಟಿ, ಕಾರ್ಯದರ್ಶಿ ಎ.ವಿ.ಎಸ್.ಮೂರ್ತಿ, ಸಹ ಕಾರ್ಯದರ್ಶಿ ಡಿ.ಪಿ. ನಾಗರಾಜ್, ಉದ್ಯಮಿ ಡಾ.ಎಂ.ಪಿ ಶಾಮ್, ಹಾಗೂ ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು ಉಪಸ್ಥಿತರಿದ್ದರು.